ಕರ್ನಾಟಕ ಸರ್ಕಾರ
**GOVERNMENT OF KARNATAKA**

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯ ಪಡೆ ಮುಖ್ಯಸ್ಥರು) ರವರ ಕಚೇರಿ
Office of the
Principal Chief Conservator of Forests
(Head of Forest Force)

ಅರಣ್ಯ ಭವನ, 18ನೇ ಅಡ್ಡ ರಸ್ತೆ,
ಮಲ್ಲೇಶ್ವರಂ ಬೆಂಗಳೂರು-560 003.
Aranya Bhavan, 18th Cross,
Malleshwaram, Bengaluru-560 003
Telephone : 080 2334 6472
Email : apccffc@gmail.com

ಸಂ.ಎ5(5).ಜಿಇಎಲ್/ಸಿಆರ್-15/2017-18

ದಿನಾಂಕ: 21/08/2018

ಇವರಿಗೆ
ರಾಜ್ಯದ ಎಲ್ಲಾ ವೃತ್ತಗಳ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ

**ವಿಷಯ:** ಅರಣ್ಯ ಸಂರಕ್ಷಣೆ ಘಟಕದಲ್ಲಿ ಕಾರ್ಯನಿರ್ವಹಿಸಲು ಇಚ್ಛಿಸುವ ಉಪ ವಲಯ ಅರಣ್ಯಾಧಿಕಾರಿ ಹಾಗೂ ಅರಣ್ಯ ರಕ್ಷಕರ ವಿವರಗಳನ್ನು ಒದಗಿಸುವ ಕುರಿತು.

------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಈ ಕಚೇರಿಯ ಅರಣ್ಯ ಸಂರಕ್ಷಣಾ ಘಟಕದಲ್ಲಿ ಕಾರ್ಯನಿರ್ವಹಿಸಲು ಹಾಗೂ ಮಾಹಿತಿ ಸಂವಹನ ತಂತ್ರಜ್ಞಾನ (ಐಸಿಟಿ)ದ ಮೂಲಕ ಕಂಪ್ಯೂಟರ್ ಆಧಾರಿತ ಕೌಶಲ್ಯವನ್ನು ಅಭಿವೃದ್ಧಿ ಪಡಿಸಿಕೊಳ್ಳಲು ಆಸಕ್ತಿಯುಳ್ಳ ಉಪ ವಲಯ ಅರಣ್ಯಾಧಿಕಾರಿ ಮತ್ತು ಅರಣ್ಯ ರಕ್ಷಕರುಗಳಿಗೆ ಅವಕಾಶ ನೀಡಲು ನಿರ್ಧರಿಸಲಾಗಿದೆ.

ಆದ್ದರಿಂದ ನಿಮ್ಮ ವೃತ್ತ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪ ವಲಯ ಅರಣ್ಯಾಧಿಕಾರಿ ಮತ್ತು ಅರಣ್ಯ ರಕ್ಷಕರುಗಳಿಗೆ ಈ ವಿಷಯವನ್ನು ತಿಳಿಸಿ, ಬೆಂಗಳೂರಿನಲ್ಲಿ ಕರ್ತವ್ಯ ನಿರ್ವಹಿಸಲು ಆಸಕ್ತಿ ಹೊಂದಿದ ಸಿಬ್ಬಂದಿಯ ವಿವರಗಳನ್ನು ಈ ಕಚೇರಿಯ ಪರಿಗಣನೆಗಾಗಿ ಇ-ಮೇಲ್(apccffc@gmail.com) ಮೂಲಕ ತುರ್ತಾಗಿ ಕಳುಹಿಸಲು ಸೂಚಿಸಿದೆ.

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯ ಪಡೆ ಮುಖ್ಯಸ್ಥರು) ಬೆಂಗಳೂರು

ಪ್ರತಿಯನ್ನು
1) ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (EWPRT) ಇವರ ಮಾಹಿತಿಗೆ ಕಳುಹಿಸುತ್ತಾ, ತರಬೇತಿ ಪೂರ್ಣಗೊಳ್ಳುತ್ತಿರುವ ಈ ಮೇಲ್ಕಂಡ ವೃಂದದ ಅಭ್ಯರ್ಥಿಗಳನ್ನು ಸಹ ಈ ಮೇಲ್ಕಂಡ ಉದ್ದೇಶಕ್ಕಾಗಿ ಪರಿಗಣಿಸಿ ಅವರ ಇಚ್ಛೆ ಇದ್ದಲ್ಲಿ ಸದರಿಯವರ ವಿವರಗಳನ್ನು ಈ ಕಚೇರಿಗೆ ಸಲ್ಲಿಸಲು ನಿರ್ದೇಶಿಸಿದೆ.
2) ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಸಂವಹನ ಮತ್ತು ಮಾಹಿತಿ) ಇವರಿಗೆ ಕಳುಹಿಸುತ್ತಾ, ವ್ಯಾಪಕ ಪ್ರಚಾರಕ್ಕಾಗಿ ಈ ಪತ್ರವನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು ಸೂಚಿಸಿದೆ.
3) ರಾಜ್ಯದ ಎಲ್ಲಾ ವಿಭಾಗಗಳ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಈ ಮೇಲೆ ತಿಳಿಸಿದಂತೆ ತುರ್ತು ಕ್ರಮಕ್ಕಾಗಿ ಕಳುಹಿಸಿದೆ.

RFO Hamsa
Pl upload as directed

CCF ICT to upload on KFD website

Pl.
7/9 CCF ICT